सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ : ರಾಚುಆ/63/ಟಿಜೆಡ್‌ಪಿ/2016

ಕರ್ನಾಟಕ ರಾಜ್ಯ ಸಹಕಾರ ಮಾರಾಟ,
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ,
ನಂ.8, ಕನ್ನಿಂಗ್‌ಹ್ಯಾಂ ರಸ್ತೆ,
ಬೆಂಗಳೂರು-52, ದಿನಾಂಕ:1-8-2017

## -: ಪತ್ರಿಕಾ ಪ್ರಕಟಣೆ :-

ವಿಷಯ: ಪಂಚಾಯ್ತಿ ಸದಸ್ಯರಿಂದ ಆನ್‌ಲೈನ್‌ನಲ್ಲೇ ಆಸ್ತಿ ವಿವರ ಸಲ್ಲಿಕೆ ಬಗ್ಗೆ.

---

ಕರ್ನಾಟಕ ಪಂಚಾಯತ್‌ರಾಜ್ (ಎರಡನೇ ತಿದ್ದುಪಡಿ) ಅಧಿನಿಯಮ,2015 ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ (ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾಯಿತ ಸದಸ್ಯರ ಆಸ್ತಿ ಘೋಷಣೆ) ನಿಯಮಗಳು, 2016 ರನ್ವಯ ರಾಜ್ಯದ ಎಲ್ಲಾ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿ ಸದಸ್ಯರುಗಳು ತಮ್ಮ ಮತ್ತು ತಮ್ಮ ಅವಿಭಕ್ತ ಕುಟುಂಬದ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಪ್ರತಿವರ್ಷವೂ ಸಲ್ಲಿಸಬೇಕೆಂಬ ಸರ್ಕಾರದ ನಿರ್ದೇಶನದಂತೆ ಆಯೋಗವು ಸುತ್ತೋಲೆಯೊಂದನ್ನು ಹೊರಡಿಸಿ, ಪಂಚಾಯ್ತಿ ಸದಸ್ಯರು ಪ್ರತಿವರ್ಷ ಆಸ್ತಿ ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವ ಬಗ್ಗೆ ಸೂಚನೆಗಳನ್ನು ನೀಡಿದೆ. ಈ ಸೂಚನೆಗಳನ್ವಯ ಗ್ರಾಮಪಂಚಾಯಿತಿ ಸದಸ್ಯರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೂಲಕ, ತಾಲ್ಲೂಕು ಪಂಚಾಯಿತಿ ಸದಸ್ಯರು ತಾಲ್ಲೂಕು ಕಾರ್ಯನಿರ್ವಾಹಕಾಧಿಕಾರಿಗಳ ಮೂಲಕ ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೂಲಕ ರಾಜ್ಯ ಚುನಾವಣಾ ಆಯೋಗಕ್ಕೆ ಆಸ್ತಿ ಹೊಣೆಗಾರಿಕೆ ವಿವರಗಳನ್ನು ಸಲ್ಲಿಸಬೇಕಾಗುತ್ತದೆ.

ಆಯೋಗದ ಸೂಚನೆಯಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಸದಸ್ಯರು 2016 ನೇ ಸಾಲಿನ ಆಸ್ತಿ ಹೊಣೆಗಾರಿಕೆ ಘೋಷಣೆ ಸಲ್ಲಿಸಿರುತ್ತಾರೆ. ಈ ವಿವರಗಳ ಪರಿಶೀಲನೆಯನ್ನೂ ಸಹ ಆಯೋಗವು ನಡೆಸಿದ್ದು, ಅಪೂರ್ಣ ವಿವರಗಳನ್ನು ನೀಡಿದವರಿಗೆ ಸ್ಪಷ್ಟೀಕರಣ ನೀಡುವಂತೆ ಈಗಾಗಲೇ ನೋಟೀಸ್‌ಗಳನ್ನು ಜಾರಿ ಮಾಡಲಾಗಿರುತ್ತದೆ. ರಾಜ್ಯದ ಒಟ್ಟು 97019 ಗ್ರಾಮ ಪಂಚಾಯತ್ ಚುನಾಯಿತ ಸದಸ್ಯರಲ್ಲಿ 1807 ಸದಸ್ಯರು ಆಸ್ತಿ ವಿವರ ಸಲ್ಲಿಸಲು ಬಾಕಿ ಇರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ, 1993ರ ಪ್ರಕರಣ 43(ಬಿ) ರಂತೆ ಸದರಿಯವರಿಗೆ ಆಯೋಗದ ಮುಂದೆ ಖುದ್ದು ಹಾಜರಾಗಿ ತಮ್ಮ ಅಹವಾಲುಗಳನ್ನು ಹೇಳಿಕೊಳ್ಳಲು ನೋಟೀಸ್‌ಗಳನ್ನು ಜಾರಿಗೊಳಿಸಲಾಗಿದೆ.

ಸರ್ಕಾರವು ವಹಿಸಿರುವ, ಪಂಚಾಯ್ತಿ ಸದಸ್ಯರ ಆಸ್ತಿ ಹೊಣೆಗಾರಿಕೆ ವಿವರಗಳ ಸ್ವೀಕೃತಿ, ಪರಿಶೀಲನೆ ಕಾರ್ಯವನ್ನು ಆಯೋಗವು ಸಮರ್ಥವಾಗಿ ನಿರ್ವಹಿಸುತ್ತಿದ್ದು, ವಿವಿಧ ಹಂತಗಳಲ್ಲಿ ಆಗುತ್ತಿರುವ ವಿಳಂಬವನ್ನು ತಡೆಯುವ ಉದ್ದೇಶದಿಂದ ಹಾಗೂ ಪಂಚಾಯ್ತಿ ಸದಸ್ಯರು ವಿವರಗಳನ್ನು ಸಲ್ಲಿಸುವ ಪ್ರಕ್ರಿಯೆಯನ್ನು ಸರಳೀಕರಣಗೊಳಿಸುವ ಉದ್ದೇಶದಿಂದ ಆನ್ ಲೈನಲ್ಲಿ ಆಸ್ತಿ ವಿವರ ಸಲ್ಲಿಸುವ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ರಾಷ್ಟ್ರೀಯ ಮಾಹಿತಿ ಕೇಂದ್ರಕ್ಕೆ ಈಗಾಗಲೇ ಸೂಚನೆ ನೀಡಲಾಗಿದೆ. ತಂತ್ರಾಂಶವು ಅಭಿವೃದ್ಧಿಯ ಹಂತದಲ್ಲಿರುತ್ತದೆ. 2017-18 ರ ಸಾಲಿನಲ್ಲಿ ಸದಸ್ಯರು ಆಸ್ತಿ ಘೋಷಣೆಯನ್ನು ಆನ್‌ಲೈನ್ ಮೂಲಕ ಸಲ್ಲಿಸುವಂತೆ ಮಾಡುವಲ್ಲಿ ಆಯೋಗವು ಕಾರ್ಯೋನ್ಮುಖವಾಗಿದೆ. ಅಲ್ಲಿಯವರೆಗೂ ಪ್ರಸ್ತುತ ಜಾರಿಯಲ್ಲಿರುವಂತೆ ಆಸ್ತಿ ಹೊಣೆಗಾರಿಕೆ ಘೋಷಣೆಯನ್ನು ಆಯೋಗದಲ್ಲಿ ಸ್ವೀಕರಿಸಲಾಗುತ್ತಿದೆ.

ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ